ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

2019-20ನೇ ಸಾಲಿನಲ್ಲಿ ಲಭ್ಯವಿರುವ ವೈದ್ಯಕೀಯ ಸೀಟುಗಳ ಕುರಿತು

ಶ್ರೀ ರವಿಕುಮಾರ್. ಎನ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

107 (05) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2019-20ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ಎಷ್ಟು ಸೀಟುಗಳು ಲಭ್ಯವಿದೆ; (ಕಾಲೇಜುವಾರು ವಿವರ ನೀಡುವುದು) ಎಷ್ಟು ವಿದ್ಯಾರ್ಥಿಗಳು ಸಂದರ್ಶನಕ್ಕೆ ಹಾಜರಾಗಿದ್ದಾರೆ; ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣಕ್ಕಾಗಿ ಪ್ರವೇಶಾವಕಾಶ ದೊರೆಯಲಿಲ್ಲ; ಇದರಲ್ಲಿ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಅನ್ಯ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಪ್ರವೇಶಾವಕಾಶ ದೊರೆತಿದೆ;

(ಇ) 2019-20ನೇ ಸಾಲಿನಲ್ಲಿ ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಪರೀಕ್ಷೆಗೆ ರಾಜ್ಯದಿಂದ ಹಾಜರಾಗಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶಾತಿ ದೊರೆತಿದೆ;

(ಈ) 2019-20ನೇ ಸಾಲಿನಲ್ಲಿ ವೈದ್ಯಕೀಯ ಪ್ರವೇಶ ಪ್ರಕ್ರಿಯೆ ಮುಗಿದ ಬಳಿಕ ಎಷ್ಟು ಸೀಟುಗಳನ್ನು ಆಡಳಿತ ಮಂಡಳಿಗೆ ಹಿಂದಿರುಗಿಸಲಾಗಿದೆ? (ಕಾಲೇಜುವಾರು ವಿವರ ನೀಡುವುದು)